**Bangalore**
**Regional News**
**27.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ರಾಜ್ಯಾದ್ಯಂತ ನಾಡಪ್ರಭು ಕೆಂಪೇಗೌಡ ಜನ್ಮದಿನೋತ್ಸವ; ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ಹಲವೆಡೆ ಗಣ್ಯರು ಭಾಗಿ

೨. ನಂದಿಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ ಹಿನ್ನೆಲೆ; ಲೊಕೋಪಯೋಗಿ ಇಲಾಖೆಯಿಂದ ಮೂಲಸೌಕರ್ಯ ಅಭಿವೃದ್ಧಿಗೆ ೯ ಕೋಟಿ ರೂಪಾಯಿ ಬಿಡುಗಡೆ

೩. ರೈತರು ಸಾಲ ಮರುಪಾವತಿ ಮಾಡುವ ಸಂದರ್ಭದಲ್ಲಿ ರೈತರಿಗೆ ಮಾರ್ಗದರ್ಶನ ಮಾಡಲು ಬ್ಯಾಂಕುಗಳಿಗೆ ಕೇಂದ್ರ ಸಚಿವ ಎಚ್ ಡಿ. ಕುಮಾರಸ್ವಾಮಿ ಸೂಚನೆ

೪. ಹೊಸ ಮತ್ತು ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯುವ ಗ್ರಾಹಕರು ಸ್ಮಾರ್ಟ್ ಮೀಟರ್ ಅಳವಡಿಸಲು ಬೆಸ್ಕಾಂ ಆದೇಶ

**<><*<><>*><>**

ರಾಜ್ಯಾದ್ಯಂತ ಇಂದು ನಾಡಪ್ರಭು ಕೆಂಪೇಗೌಡರ ೫೧೬ನೇ ಜನ್ಮ ದಿನೋತ್ಸವವನ್ನು ಆಚರಿಸಲಾಯಿತು. ವಿವಿಧೆಡೆ ಹಲವು ಗಣ್ಯರು ಭಾಗವಹಿಸಿ, ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಹಲವೆಡೆ ಪಲ್ಲಕ್ಕಿಯೊಂದಿಗೆ ಕೆಂಪೇಗೌಡರ ಭಾವಚಿತ್ರದ ಮೆರವಣಿಗೆ ನಡೆಯಿತು. ಕಳೆದ ಸಚಿವ ಸಂಪುಟದಲ್ಲಿ ತೀರ್ಮಾನಿಸಿದಂತೆ ಸುಮನಹಳ್ಳಿ ವೃತ್ತದಲ್ಲಿ ಕೆಂಪೇಗೌಡ ಭವನವನ್ನು ನಿರ್ಮಿಸಲು ಶಂಕುಸ್ಥಾಪನೆ ನೆರವೇರಿಸಲಾಗಿದೆ. ಆದಷ್ಟು ಶೀಘ್ರವಾಗಿ ಕಟ್ಟಡವನ್ನು ನಿರ್ಮಾಣ ಮಾಡಿ ಉದ್ಘಾಟಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಅವರು ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಡಾ.ಬಾಬು ಜಗಜೀವನ ರಾಮ್ ಭವನದಲ್ಲಿ ಆಯೋಜಿಸಲಾಗಿದ್ದ ನಾಡಪ್ರಭು ಕೆಂಪೇಗೌಡರ ೫೧೬ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸುಮನಹಳ್ಳಿಯ ಡಾ.ಬಾಬು ಜಗಜೀವನರಾಮ್ ಭವನದಲ್ಲಿಂದು ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ ೫೧೬ನೇ ಜಯಂತಿ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉದ್ಘಾಟಿಸಿದರು. ಜಿಲ್ಲಾ ಒಕ್ಕಲಿಗರ ಸಂಘದಿಂದ ಕೋಲಾರ ನಗರದಲ್ಲಿ ಹಮ್ಮಿಕೊಂಡಿದ್ದ ಕೆಂಪೇಗೌಡರ ೫೧೬ನೇ ಜಯಂತಿ ಕಾರ್ಯಕ್ರಮದಲ್ಲಿ ಪಲ್ಲಕ್ಕಿಗಳ ಮೆರವಣಿಗೆಗೆ ಚಿಕ್ಕಬಳ್ಳಾಪುರ ಆದಿಚುಂಚನಗಿರಿ ಶಾಖಾಮಠದ ಶ್ರೀ ಮಂಗಳಾನಂದನಾಥ ಸ್ವಾಮೀಜಿ ಚಾಲನೆ ನೀಡಿದರು. ವಿಧಾನಪರಿಷತ್ ಸದಸ್ಯ ಇಂಚರ ಗೋವಿಂದರಾಜು ಒಕ್ಕಲಿಗ ಸಂಘದ ಜಿಲ್ಲಾಧ್ಯಕ್ಷ ಕೆ.ವಿ.ಶಂಕರಪ್ಪ ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು. ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮ ಗದಗ ಜಿಲ್ಲಾಧಿಕಾರಿಗಳ

ಕಾರ್ಯಾಲದ ಸಭಾಭವನದಲ್ಲಿ ಜರುಗಿತು. ನಾಡ ಪ್ರಭು ಕೆಂಪೇಗೌಡ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ಅವರು ಪುಷ್ಪ ನಮನ ಸಲ್ಲಿಸಿ,ಗೌರವಿಸಿದರು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಕೆಂಪೇಗೌಡರ ಜಯಂತ್ಯುತ್ಸವದಲ್ಲಿ ಶಾಸಕ ಧೀರಜ್ ಮುನಿರಾಜು ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಅವರ ದೂರದೃಷ್ಟಿಯುಳ್ಳ ಕ್ರಾಂತಿಕಾರಕ ಆಡಳಿತ ವೈಖರಿಯಿಂದ ಇಂದು ಬೆಂಗಳೂರು ಇಡೀ ಜಗತ್ತಿನ ಗಮನ ಸೆಳೆಯುತ್ತಿದೆ.

ನಾಡಪ್ರಭು ಕೆಂಪೇಗೌಡರ ೫೧೩ನೇ ಜಯಂತಿ ಉತ್ಸವದ ಅಂಗವಾಗಿ ಧಾರವಾಡ ಜಿಲ್ಲಾಡಳಿತದಿಂದ ಆಯೋಜಿಸಲಾಗಿದ್ದ ಸಮಾರಂಭದಲ್ಲಿ ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪುಷ್ಪನಮನ ಸಲ್ಲಿಸದರು. ೫೦೦ ವರ್ಷಗಳ ಹಿಂದೆಯೇ ಬೆಂಗಳೂರು ನಗರವನ್ನು ಅತ್ಯಂತ ವೈಜ್ಞಾನಿಕವಾಗಿ ನಿರ್ಮಾಣಮಾಡಿರುವುದು ಕೆಂಪೇಗೌಡರ ದೂರದೃಷ್ಟಿ ಮತ್ತು ವೈಜ್ಞಾನಿಕ ಜಾಣ್ಮೆಗೆ ಸಾಕ್ಷಿಯಾಗಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಹೇಳಿದ್ದಾರೆ. ಚಿಕ್ಕಮಗಳೂರು ಜಿಲ್ಲಾಡಳಿತ ವತಿಯಿಂದ ನಗರದ ಕುವೆಂಪು ಕಲಾಮಂದಿರದಲ್ಲಿ ಕೆಂಪೇಗೌಡರ ಜಯಂತಿ ಆಚರಿಸಲಾಯಿತು. ಜಿಲ್ಲಾಧಿಕಾರಿ ಮೀನಾ ನಾಗರಾಜ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೀರ್ತನಾ ಸೇರಿ ಹಲವರು ಪಾಲ್ಗೊಂಡಿದ್ದರು. ಉತ್ತರಕನ್ನಡ ಜಿಲ್ಲೆಯ ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಾಡಪ್ರಭು ಕೆಂಪೇಗೌಡರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ನಾಡಪ್ರಭು ಕೆಂಪೇಗೌಡರ ಕಾರ್ಯ ಶ್ಲಾಘನೀಯವಾದುದು, ಇಡೀ ವಿಶ್ವದಲ್ಲಿ ಬೆಂಗಳೂರು ಇವತ್ತು ಗುರುತಿಸಿಕೊಂಡಿದೆ.ಬೆಂಗಳೂರು ನಿರ್ಮಾಣದಲ್ಲಿ ಕೆಂಪೇಗೌಡರ ಕೊಡುಗೆಯನ್ನು ಸ್ಮರಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ವಿಜಯಪುರದಲ್ಲಿ ಜಿಲ್ಲಾಧಿಕಾರಿ ಟಿ. ಭೂಬಾಲನ್ ಹೇಳಿದರು. ಮೈಸೂರು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಾಗೂ ಕೆಂಪೇಗೌಡ ಜಯಂತೋತ್ಸವ ಸಮಿತಿ ಸಹಯೋಗದೊಂದಿಗೆ ಕರ್ನಾಟಕ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೆಂಪೇಗೌಡರ ಜಯಂತಿಯನ್ನು ಶಾಸಕ ಜಿ.ಟಿ ದೇವೇಗೌಡ ಉದ್ಘಾಟಿಸಿದರು.

**<><*<><>*><>**

ಜುಲೈ ೦೨ ರಂದು ನಂದಿಗಿರಿಧಾಮದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆ ಹಿನ್ನೆಲೆಯಲ್ಲಿ ಗಿರಿಧಾಮದಲ್ಲಿ ರಸ್ತೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಲೋಕೋಪಯೋಗಿ ಇಲಾಖೆ ಸಚಿವರು ೯ ಕೋಟಿ ರೂಪಾಯಿ ಹಣ ಬಿಡುಗಡೆ ಮಾಡಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ನಂದಿ ಗಿರಿಧಾಮದಲ್ಲಿ ರಸ್ತೆಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಹಣ ನೀಡುವಂತೆ ಲೋಕೋಪಯೋಗಿ ಇಲಾಖೆಗೆ ಮನವಿ ಸಲ್ಲಿಸಲಾಗಿತ್ತು. ನಂದಿಗಿರಿಧಾಮದಲ್ಲಿ ವಿನೂತನ ರಸ್ತೆಗಳು ನಿರ್ಮಾಣವಾಗಲಿವೆ. ಸಚಿವ ಸಂಪುಟ ಸಭೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಸಂಬಂಧಿಸಿದಂತೆ ಹಲವು ಹೊಸ ಯೋಜನೆಗಳು ಘೋಷಣೆಯಾಗುವ ನಿರೀಕ್ಷೆ ಇದೆ ಎಂದು ಸಚಿವ ಡಾ.ಎಂ.ಸಿ.ಸುಧಾಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<><*<><>*><>**

ರೈತರು ತಾವು ಪಡೆದ ಸಾಲವನ್ನು ಒಮ್ಮೆಲೇ ಪಾವತಿ ಮಾಡುವ ಸಂದರ್ಭದಲ್ಲಿ ಬ್ಯಾಂಕುಗಳು ಸೂಕ್ತ ಮಾರ್ಗದರ್ಶನ ಮಾಡಬೇಕು ಹಾಗೂ ಪುನಃ ಸಾಲ ನೀಡಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಬ್ಯಾಂಕುಗಳಿಗೆ ಸೂಚಿಸಿದರು. ಮಂಡ್ಯದಲ್ಲಿಂದು ನಡೆದ ಜಿಲ್ಲಾ ಬ್ಯಾಂಕ್ ಮುಖ್ಯಸ್ಥರ ಸಭೆಯಲ್ಲಿ ಆನ್‌ಲೈನ್ ಮೂಲಕ ಮಾತನಾಡಿದ ಸಚಿವರು, ನಾನಾ ಉದ್ದೇಶಗಳಿಗೆ ರೈತರು ಪಡೆಯುವ ಸಾಲಗಳಿಗೆ ಬಡ್ಡಿ ಜಾಸ್ತಿ ಎನ್ನುವ ದೂರುಗಳು ಬರುತ್ತಿವೆ. ಈ ಹಿನ್ನಲೆಯಲ್ಲಿ ಅವರು ಏಕಕಾಲಕ್ಕೆ ತಮ್ಮ ಸಾಲವನ್ನು ಪಾವತಿ ಮಾಡಲು ಮುಂದಾಗುತ್ತಿದ್ದಾರೆ. ಅಂತಹ ರೈತರಿಗೆ ಬ್ಯಾಂಕುಗಳು ಸಹಕರಿಸಬೇಕು. ರೈತರ ವಿಷಯದಲ್ಲಿ ಯಾವುದೇ ಕಾರಣಕ್ಕೂ ಕಠಿಣವಾಗಿ ನಡೆದುಕೊಳ್ಳಬೇಡಿ ಎಂದು ಸೂಚನೆ ನೀಡಿದರು.

**<><*<><>*><>**

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಆದೇಶದಂತೆ ಬೆಸ್ಕಾಂ ವ್ಯಾಪ್ತಿಯ ಗ್ರಾಮಾಂತರ ಪ್ರದೇಶಗಳಲ್ಲಿ ೨೦೨೫ರ ಜುಲೈ ೧ ರಿಂದ ಹೊಸ ಮತ್ತು ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯುವ ಗ್ರಾಹಕರು ಸ್ಮಾರ್ಟ್ ಮೀಟರ್ ಅಳವಡಿಸಿಕೊಳ್ಳಬೇಕಿದೆ. ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕಗಳಿಗೆ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯಗೊಳಿಸಿ ಬೆಸ್ಕಾಂ ಆದೇಶ ಹೊರಡಿಸಿದೆ. ಬೆಸ್ಕಾಂ ವ್ಯಾಪ್ತಿಯ ಬೆಂಗಳೂರು ನಗರ ಸೇರಿದಂತೆ ಎಲ್ಲಾ ನಗರ ಪ್ರದೇಶಗಳಲ್ಲಿ ೨೦೨೫ರ ಫೆಬ್ರವರಿ ೧೫ರಿಂದ ಸ್ಮಾರ್ಟ್ ಮೀಟರ್ ಅಳವಡಿಕೆ ಆರಂಭಗೊಂಡಿದ್ದು, ಈಗ ಬೆಸ್ಕಾಂ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಿಗೂ ಕೂಡಾ ಯೋಜನೆ ವಿಸ್ತರಿಸಲಾಗಿದೆ. ಹೊಸ ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕಗಳಿಗೆ ಗ್ರಾಹಕರು ಅರ್ಜಿ ಸಲ್ಲಿಸಿ, ಬೆಸ್ಕಾಂನ ನೋಂದಾಯಿತ ಮಳಿಗೆಗಳಿಂದ ಸ್ಮಾರ್ಟ್ ಮೀಟರ್‌ಗಳನ್ನು ಖರೀದಿಸಿ ವಿದ್ಯುತ್ ಸಂಪರ್ಕ ಪಡೆಯಬಹುದು ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

**<><*<><>*><>**

ಗ್ರಾಮಗಳ ಅಭಿವೃದ್ಧಿ ಮಾಡದೇ ಈ ದೇಶ ಅಭಿವೃದ್ಧಿಯಾಗಲು ಸಾಧ್ಯವಿಲ್ಲ, ಕೃಷಿ ಅಭಿವೃದ್ಧಿ ಆದರೆ ಆಹಾರದ ಸುರಕ್ಷತೆ ಆಗುತ್ತದೆ. ಆಹಾರದ ಸುರಕ್ಷತೆ ಯಾವ ದೇಶಕ್ಕಿದೆಯೋ ಅದು ಸ್ವಾವಲಂಬನೆಯ ಸ್ವಾಭಿಮಾನದ ದೇಶ ಆಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಅವರು ಇಂದು ಗದಗ ತಾಲೂಕಿನ ನಾಗಾವಿ ಗ್ರಾಮದಲ್ಲಿ ಸುಮಾರು ೧೦ ಲಕ್ಷ ರೂಪಾಯಿ ವೆಚ್ಚದಲ್ಲಿ ಲೋಕಸಭಾ ಸದಸ್ಯರ ಸ್ಥಳೀಯ ಕ್ಷೇತ್ರಾಭಿವೃದ್ಧಿ ನಿಧಿಯಲ್ಲಿ ನಿರ್ಮಿಸಲಾಗುತ್ತಿರುವ ಗ್ರಾಮದೇವಿ ಸಮುದಾಯ ಭವನದ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

**<><*<><>*><>**

ಬೆಂಗಳೂರು ನಗರ ಜಿಲ್ಲೆಯ ಕಾಡುಗೋಡಿ ಗ್ರಾಮದ ದಲಿತರನ್ನು ಒಕ್ಕಲೆಬ್ಬಿಸಿ ಮೌಲ್ಯಯುತ ಜಮೀನು ಕಿತ್ತುಕೊಂಡು ಬಂಡವಾಳ ಮಾಡಿಕೊಳ್ಳಲು ಹುನ್ನಾರ ನಡೆದಿದೆ ಎಂದು ರಾಜ್ಯ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿಂದು ಮಾತನಾಡಿದ ಅವರು, ಹಿಂದೆ ಅರಣ್ಯ ಭೂಮಿ ಇದ್ದಿರಬಹುದಾದ ಜಮೀನನ್ನು ಕಂದಾಯ ಭೂಮಿ ಎಂದು ಕೊಟ್ಟ ಮೇಲೆ ಕಂದಾಯ ಇಲಾಖೆ ಅದನ್ನು ವಿತರಿಸಿದೆ. ರೈಲ್ವೆ, ಕೆಐಎಡಿಬಿಗೂ ಜಾಗ ಕೊಡಲಾಗಿತ್ತು. ಇದೀಗ ದಲಿತರನ್ನು ಒಕ್ಕಲೆಬ್ಬಿಸುವ ಹುನ್ನಾರ

ನಡೆಯುತ್ತಿದೆ. ಕಂದಾಯ ಇಲಾಖೆ ಸಚಿವರು, ಕೈಗಾರಿಕಾ ಸಚಿವರು, ಅರಣ್ಯ ಸಚಿವರ ಸಮ್ಮುಖದಲ್ಲಿ ಮುಖ್ಯಮಂತ್ರಿಗಳು ಪಟ್ಟಾದಾರರ ಸಭೆ ಕರೆದು ಅರಣ್ಯ ಇಲಾಖೆ ಕಾರ್ಯಾಚರಣೆಯನ್ನು ತಕ್ಷಣ ನಿಲ್ಲಿಸಬೇಕು ಎಂದು ಅವರು ಆಗ್ರಹಿಸಿದರು.

**<><*<><>*><>**

ಮೈದುಂಬಿ ಹರಿಯುತ್ತಿರುವ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜ ಸಾಗರ ಜಲಾಶಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಬಾಗಿನ ಅರ್ಪಣೆ ಮಾಡಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೇರಿದಂತೆ ಸಚಿವರು, ಶಾಸಕರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ೧೯೪೦ರ ಬಳಿಕ ಇದೇ ಮೊದಲ ಬಾರಿಗೆ ಜೂನ್ ತಿಂಗಳಲ್ಲೇ ಜಲಾಶಯದಲ್ಲಿ ನೀರಿನ ಮಟ್ಟ ೧೨೪ ಅಡಿ ತಲುಪಿರುವುದು ವಿಶೇಷ.

**<><*<><>*><>**

ಹಿರಿಯ ಪತ್ರಕರ್ತ ಎನ್.ಸಿ. ಗುಂಡೂರಾವ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಡೆಕ್ಕನ್ ಹೆರಾಲ್ಡ್ ಪತ್ರಿಕೆಯಲ್ಲಿ ಪ್ರೂಫ್ ರೀಡರ್ ಆಗಿ ವೃತ್ತಿಜೀವನ ಆರಂಭಿಸಿದ್ದ ಗುಂಡೂರಾವ್ ಅವರು ನಂತರ ಪತ್ರಿಕೆಯ ಸಹಸಂಪಾದಕರಾಗಿ ನಿವೃತ್ತರಾಗಿದ್ದರು ಎನ್ನುವುದು ಅವರಲ್ಲಿನ ವೃತ್ತಿಪರತೆ - ಬದ್ಧತೆಗೆ ನಿದರ್ಶನ ಎಂದು ಹೇಳಿದ್ದಾರೆ. ಸರಳ ಮತ್ತು ಸಜ್ಜನರಾಗಿದ್ದ ಗುಂಡೂರಾವ್ ಅವರು ವೃತ್ತಿಧರ್ಮವನ್ನು ಒಂದು ವ್ರತದಂತೆ ಪಾಲಿಸಿಕೊಂಡು ಬಂದವರು. ಮಾಧ್ಯಮರಂಗದ ಇಂದಿನ ಪೀಳಿಗೆಗೆ ಇವರ ಬದುಕು ಮತ್ತು ಸಾಧನೆ ಪ್ರೇರಣೆ ನೀಡಲಿ ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ.

**<><*<><>*><>**

<u>ಸಂಕ್ಷಿಪ್ತ ಸುದ್ದಿ</u>

೧. ಕೇಂದ್ರ ಮತ್ತು ರಾಜ್ಯದ ಯೋಜನೆಗಳಾದ ಪ್ರಧಾನಮಂತ್ರಿ ಜೀವನ್‌ಜ್ಯೋತಿ ಭೀಮಾ ಯೋಜನಾ- ಪಿಎಂಜೆಜೆಬಿವೈ, ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನಾ- ಪಿಎಂಎಸ್‌ಬಿಐ, ಅಟಲ್ ಪೆನ್ಷನ್ ಯೋಜನೆ-ಎಪಿವೈ, ಮುದ್ರಾಯೋಜನಾ ಪಿಎಂ, ಸ್ವನಿಧಿ, ಪಿಎಂ ವಿಶ್ವಕರ್ಮ ಯೋಜನೆಗಳ ಕುರಿತು ಜನಸಾಮಾನ್ಯರಿಗೆ ತಿಳಿವಳಿಕೆ ನೀಡಿ ಎಂದು ರಾಯಚೂರು ಸಂಸದ ಜಿ.ಕುಮಾರ್ ನಾಯಕ್, ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**